O.S.No.334/2017
DW -1

ದಿನಾಂಕ 18/03/2024 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣೀಕರಿಸಲಾಯ್ತು.

**ಮುಖ್ಯ ವಿಚಾರಣೆ :- ಶ್ರೀ ಎಸ್.ಎಸ್.ಆರ್. ಪ್ರತಿವಾದಿ ಪರ ವಕೀಲರಿಂದ**

ಈ ದಿನ ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು ಅದರಲ್ಲಿರುವ ಎಲ್ಲಾ ಅಂಶಗಳನ್ನು ನಾನೇ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಅಂಶಗಳೆಲ್ಲವೂ ಸತ್ಯವಾಗಿದೆ, ಹಾಗೂ ಸದರಿ ಪ್ರಮಾಣ ಪತ್ರಕ್ಕೆ ನಾನೇ ತಿಳಿದು ಸಹಿ ಮಾಡಿರುತ್ತೇನೆ ನಾನು ಈ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ.

ನಾನು ಈ ದಿನ ನೋಟರಿ ರವರ ಮುಂದಿನ ವಂಶವೃಕ್ಷದ ಪ್ರಮಾಣ ಪತ್ರ ಹಾಜರುಪಡಿಸುತ್ತಿದ್ದು ಅದನ್ನು ನಿಡಿ-1 ಎಂದು, ನನ್ನ ತಂದೆ ಹಾಗೂ ನನ್ನ ದೊಡ್ಡಪ್ಪನ ಮರಣ ಪ್ರಮಾಣ ಪತ್ರಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಡಿ2 ಮತ್ತು ನಿಡಿ-3 ಎಂದು, 10 ಸ್ವತ್ತಿನ ಋಣ ಭಾರ ರಾಹಿತ್ಯ ಪ್ರಮಾಣ ಪತ್ರಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾರೆಯಾಗಿ ನಿಡಿ-4 ಎಂದು, ದಿ.25/03/1925 ರ ಕ್ರಯ ಪತ್ರದ ದೃಢೀಕೃತ ಪ್ರತಿ ಹಾಜರುಪಡಿಸುತ್ತಿದ್ದು ಅದನ್ನು ನಿಡಿ -5 ಎಂದು, ದಿ.30/06/1926 ರ ಆಧಾರ ಪತ್ರದ ದೃಢೀಕೃತ ಪ್ರತಿ ಹಾಜರುಪಡಿಸುತ್ತಿದ್ದು ಅದನ್ನು ನಿಡಿ 6 ಎಂದು, ದಿ.08/02/1939 ರ ಆಧಾರ ಪತ್ರದ ದೃಢೀಕೃತ ಪ್ರತಿ ಹಾಜರುಪಡಿಸುತ್ತಿದ್ದು ಅದನ್ನು ನಿಡಿ-7 ಎಂದು, ದಿ.09/08/1969 ರ ವಿಭಾಗ ಪತ್ರದ ದೃಢೀಕೃತ ಪ್ರತಿ ಹಾಜರುಪಡಿಸುತ್ತಿದ್ದು ಅದನ್ನು ನಿಡಿ-8 ಎಂದು, ಎಂ.ಆರ್ ಸಂಖ್ಯೆ-9/1949-50 ಇದರ ಮುಟೇಷನ್‌ನ ದೃಢೀಕೃತ ಪ್ರತಿ ಹಾಜರುಪಡಿಸುತ್ತಿದ್ದು ಅದನ್ನು ನಿಡಿ-9 ಎಂದು, ದಿ.03/08/1980 ರ ದಾನ ಪತ್ರದ ದೃಢೀಕೃತ ಪ್ರತಿ ಹಾಜರುಪಡಿಸುತ್ತಿದ್ದು ಅದನ್ನು ನಿಡಿ 10 ಎಂದು, ದಿ.05/02/2018 ರಂದು ತಹಸೀಲ್ದಾರ್ ರವರು ನೀಡಿದ ಹಿಂಬರಹದ ಪ್ರತಿ ಹಾಜರುಪಡಿಸುತ್ತಿದ್ದು ಅದನ್ನು ನಿಡಿ-11 ಎಂದು, ಸರ್ವೆ ನಂ-38/1 ಎ ಇದರ ಹಿಸ್ಸಾ ಟಿಪ್ಪಣಿಯ ದೃಢೀಕೃತ ಪ್ರತಿ ಹಾಜರುಪಡಿಸುತ್ತಿದ್ದು ಅದನ್ನು ನಿಡಿ-12 ಎಂದು, ಗ್ರಾಮ ಲೆಕ್ಕಾಧಿಕಾರಿ ನೀಡಿದ ಸ್ಕೆಚ್ ನ ಪ್ರತಿ ಹಾಜರುಪಡಿಸುತ್ತಿದ್ದು ಅದನ್ನು ನಿಡಿ-13

ಎಂದು, ಸರ್ವೆ ನಂ-98/1 ಎ ಇದರ ನಮೂನೆ-5 ರ 2 ದೃಢೀಕೃತ ಪ್ರತಿಗಳನ್ನು ಹಾಜರುಪಡಿಸುತ್ತಿದ್ದು ಅವುಗಳನ್ನು ಕ್ರಮವಾಗಿ ನಿಡಿ-14 ಮತ್ತು ನಿಡಿ-15 ಎಂದು, ಸರ್ವೆ ನಂ-98 ಇದರ ಕರ್ನಾಟ ರಿವಿಜನ್ ಸೆಟ್ಲಮೆಂಟ್ ಆಕಾರ್ ಬಂದ್‌ನ ಪ್ರತಿ ಹಾಜರುಪಡಿಸುತ್ತಿದ್ದು ಅದನ್ನು ನಿಡಿ-16 ಎಂದು ಗುರುತಿಸಲಾಯಿತು.

ನಾನು ಹಾಜರುಪಡಿಸಿರುವ ದಾಖಲಾತಿಗಳನ್ನು ಪರಿಗಣಿಸಿ ದಾವೆಯನ್ನು **ವಜಾ**ಗೊಳಿಸಬೇಕಾಗಿ ಕೋರುತ್ತೇನೆ.

**ಪಾಟೀ ಸವಾಲುಃ- ವಾದಿ ಪರ ವಕೀಲರು ತಮ್ಮ ಪರ ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.**

**ಪಾಟೀ ಸವಾಲುಃ- ಪ್ರತಿವಾದಿ 8 ಪರ ವಕೀಲರು ಸಮಯ ಕೋರಿದ್ದು, ಸಮಯ ನೀಡಲಾಯಿತು.**

(ತೆ ನ್ಯಾ ನ ಉ ಲೇ ಬೆ ಮಾ )

ಓ ಹೇ ಕೇ ಸ ಇ ಎ ಒ

( ರಘುನಾಥ ಗೌಡ ಕೆ.ಟಿ. )
ಪ್ರಧಾನ ಸಿವಿಲ್ ಜಡ್ಜ್, ಮಧುಗಿರಿ.